# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 596 |
| 2 | ಸದಸ್ಯರ ಹೆಸರು | : | ಶ್ರೀ ಪಿ.ಆರ್. ರಮೇಶ್ (ನಾಮ ನಿರ್ದೇಶನ ಹೊಂದಿದವರು) |
| 3 | ಉತ್ತರಿಸುವ ದಿನಾಂಕ | : | 16-09-2021 |
| 4 | ಉತ್ತರಿಸುವವರು | : | ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮುಖ್ಯ ಕಛೇರಿಯ ಆವರಣದಲ್ಲಿರುವ ಹಲಸೂರು ಪೇಟೆ ಶ್ರೀ ಧರ್ಮರಾಯಸ್ವಾಮಿ ದೇವಸ್ಥಾನಕ್ಕೆ ಸಂಬಂಧಪಟ್ಟ ಏಳು ಸುತ್ತಿನ ಕೋಟೆ ದೇವಸ್ಥಾನ ಇದ್ದು, ಇದರ ಅಭಿವೃದ್ಧಿಗೆ ಸರ್ಕಾರದ ವತಿಯಿಂದ ಕಳೆದ 3 ವರ್ಷಗಳಲ್ಲಿ ಅನುದಾನ ಬಿಡುಗಡೆ ಆಗಿದೆಯೇ; (ವಿವರ ನೀಡುವುದು) | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮುಖ್ಯ ಕಛೇರಿಯ ಆವರಣದಲ್ಲಿರುವ ಹಲಸೂರು ಪೇಟೆ ಶ್ರೀ ಧರ್ಮರಾಯಸ್ವಾಮಿ ದೇವಸ್ಥಾನವು ಧಾರ್ಮಿಕ ದತ್ತಿ ಇಲಾಖೆಗೆ ಒಳಪಡುವುದಿಲ್ಲ. ಈ ಹಿನ್ನೆಲೆಯಲ್ಲಿ ಕಳೆದ 3 ವರ್ಷಗಳಲ್ಲಿ ಮುಜರಾಯಿ ಇಲಾಖೆ ವತಿಯಿಂದ ಅನುದಾನ ಬಿಡುಗಡೆ ಮಾಡಿರುವುದಿಲ್ಲ.<br><br>ಮುಂದುವರೆದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು 2019-20ನೇ ಸಾಲಿನಲ್ಲಿ ಪಿ-ಕೋಡ್: 2724ರ ಅಡಿಯಲ್ಲಿ ರೂ.50.00 ಲಕ್ಷಗಳ ಜಾಬ್ ಸಂಖ್ಯೆ: 110-20-000008 ರನ್ವಯ ಅನುದಾನವನ್ನು ಬಿಡುಗಡೆ ಮಾಡಿರುತ್ತದೆ. |
| ಆ | ಶ್ರೀ ಧರ್ಮರಾಯಸ್ವಾಮಿ ದೇವಸ್ಥಾನದ ಅಭಿವೃದ್ಧಿಗೆ ಸಂಬಂಧಪಟ್ಟಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಮೇಯರ್ ಅನುದಾನ ಅಥವಾ ಇನ್ನಿತರೆ ಯಾವುದಾದರೂ ಅನುದಾನ ಬಿಡುಗಡೆ ಮಾಡಲಾಗಿದೆಯೇ: (ಮಾಡಿದ್ದಲ್ಲಿ, ಅದರ ಸಂಪೂರ್ಣ ವಿವರವನ್ನು ಒದಗಿಸುವುದು) | ಸದರಿ ದೇವಸ್ಥಾನಕ್ಕೆ ಪೂಜ್ಯ ಮಹಾಪೌರರ ಅನುದಾನದ ಅಡಿಯಲ್ಲಿ ಯಾವುದೇ ಅನುದಾನ ನೀಡಿರುವುದಿಲ್ಲ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು 2019-20ನೇ ಸಾಲಿನಲ್ಲಿ ಪಿ-ಕೋಡ್: 2724ರ ಅಡಿಯಲ್ಲಿ ರೂ.50.00 ಲಕ್ಷಗಳ ಜಾಬ್ ಸಂಖ್ಯೆ: 110-20-000008 ರನ್ವಯ ಅನುದಾನವನ್ನು ಬಿಡುಗಡೆ ಮಾಡಿರುತ್ತದೆ. |
| ಇ | ಸದರಿ ದೇವಸ್ಥಾನದ ಜೀರ್ಣೋದ್ಧಾರಕ್ಕಾಗಿ ಪಾಲಿಕೆಯು ಯಾವುದಾದರೂ ಯೋಜನೆಗಳನ್ನು ರೂಪಿಸಿ, ಅನುದಾನಗಳನ್ನು ಮೀಸಲಿರಿಸಲಾಗಿದೆಯೇ? (ವಿವರ ನೀಡುವುದು) | ಇಲ್ಲ. |

**ಸಂಖ್ಯೆ: ನಅಇ 231 ಎಂಎನ್‌ವೈ 2021 (ಇ)**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ